17.12.24

(50)

## ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಡಿ.ಎಸ್ ಅರುಣ್ ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಕುರಿತು.

**ವಿಷಯ:**

ಮಲೆನಾಡು ಗಿಡ್ಡ ಸಂಶೋಧನೆಗೆ ಕುತ್ತು' ವಿಷಯ ಕುರಿತು ಉದಯವಾಣಿ ದಿನಪತ್ರಿಕೆಯಲ್ಲಿ ವರದಿ ಪ್ರಕಟವಾಗಿರುತ್ತದೆ. ಮಲೆನಾಡು ಗಿಡ್ಡ ಗೋವು ತಳಿ ಭೌಗೋಳಿಕ ಮಾನ್ಯತೆ ಹೊಂದಿದ್ದು, ಪ್ರಮುಖವಾಗಿ ಮಲೆನಾಡಿನ ಶಿವಮೊಗ್ಗ, ಚಿಕ್ಕಮಗಳೂರು, ದಕ್ಷಿಣ ಕನ್ನಡ, ಉತ್ತರ ಕನ್ನಡ ಉಡುಪಿಯಲ್ಲಿ ಈ ತಳಿ ಹೇರಳವಾಗಿ ಕಂಡುಬರುವಂಥದ್ದಾಗಿದೆ. ಈ ತಳಿಯ ಹಾಲಿನಲ್ಲಿ ಎ-2 ಕೆಸಿನ್ ಅಧಿಕವಿದ್ದು ಜಗತ್ತಿನಲ್ಲೇ ಕಡಿಮೆ ಕೊಲೆಸ್ಟ್ರಾಲ್ ಅಂಶ ಹೊಂದಿರುವುದು ಧೃಡಪಟ್ಟಿರುತ್ತದೆ. ರಾಜ್ಯದ ಪಶು ವರ್ಗದಲ್ಲಿ ವಿಶಿಷ್ಟ ಸ್ಥಾನ ಪಡೆದಿರುವ ಮಲೆನಾಡು ಗಿಡ್ಡ ತಳಿಯ ಬಗ್ಗೆ ಅಧ್ಯಯನ ಕೈಗೊಳ್ಳಲು ಪಶುವೈದ್ಯಕೀಯ ಮಹಾವಿದ್ಯಾಲಯ ಆವರಣದಲ್ಲಿ ಸ್ಥಾಪಿಸಿದ ಮಲೆನಾಡು ಗಿಡ್ಡ ತಳಿ ಸಂಶೋಧನೆ ಹಾಗೂ ಮಾಹಿತಿ ಕೇಂದ್ರಕ್ಕೆ ಬೀಗ ಜಡಿಯುವ ಸ್ಥಿತಿಗೆ ತಲುಪಿರುವುದನ್ನು ಪತ್ರಿಕೆ ಬೆಳಕಿಗೆ ತಂದಿರುತ್ತದೆ.

ಬಿ.ಎಸ್.ಯಡಿಯೂರಪ್ಪ ಅವರು ಮುಖ್ಯಮಂತ್ರಿ ಆಗಿದ್ದಾಗ ಶಿವಮೊಗ್ಗದ ಪಶುವೈದ್ಯಕೀಯ ಮಹಾವಿದ್ಯಾಲಯದಲ್ಲಿ ಮಲೆನಾಡು ಗಿಡ್ಡ ತಳಿ ಸಂಶೋಧನೆ ಹಾಗೂ ಮಾಹಿತಿ ಕೇಂದ್ರ ಸ್ಥಾಪಿಸಲಾಗಿದ್ದು, 1 ಕೋಟಿ ರೂ. ಅನುದಾನ ಸಹ ಮಂಜೂರು ಮಾಡಿರುವುದಿಲ್ಲ.

ಪ್ರಸ್ತುತ ಈ ಕೇಂದ್ರವು ಯಾವುದೇ ಸವಲತ್ತು ಹಾಗೂ ಸಿಬ್ಬಂದಿಗಳನ್ನು ಹೊಂದಿಲ್ಲದೆ ಯಾರಿಗೂ ಬೇಡವಾದ ಕೂಸಾಗಿರುತ್ತದೆ.

ಮಲೆನಾಡು ಗಿಡ್ಡ ತಳಿಯ ಹಾಲು ಮತ್ತು ಅದರ ಉತ್ಪನ್ನಗಳಿಗೆ ಬೇಡಿಕೆ ಇದ್ದು ಹಾಲಿನಲ್ಲಿರುವ ಔಷಧೀಯ ಗುಣದ ಬಗ್ಗೆ ಹಾಗೂ ಅತಿ ಹೆಚ್ಚು ರೋಗ ನಿರೋಧಕ ಶಕ್ತಿಯ ಬಗ್ಗೆ ಹೆಚ್ಚಿನ ಅಧ್ಯಯನ ನಡೆಸುವ ಸಲುವಾಗಿ ಮಲೆನಾಡು ಗಿಡ್ಡತಳಿ ಸಂಶೋಧನೆಗೆ ಅನುಕೂಲವಾಗುವಂತೆ ಮಾಹಿತಿ ಕೇಂದ್ರವನ್ನು ಪುನರಾರಂಭಿಸಬೇಕು. ಸಂಶೋಧನೆಗೆ ಸರ್ಕಾರ ಹೆಚ್ಚಿನ ಒತ್ತುಕೊಟ್ಟು ಅಗತ್ಯವಿರುವ ಅನುದಾನವನ್ನು ಸಹ ಬಿಡುಗಡೆ ಮಾಡುವ ಕುರಿತು.

**ಉತ್ತರ**

ಶಿವಮೊಗ್ಗ ಪಶುವೈದ್ಯಕೀಯ ಮಹಾವಿದ್ಯಾಲಯ ವ್ಯಾಪ್ತಿಯಲ್ಲಿ ಮಲೆನಾಡು ಗಿಡ್ಡ ತಳಿ ಸಂಶೋಧನಾ ಮಾಹಿತಿ ಕೇಂದ್ರ ಸ್ಥಾಪಿಸಲಾಗಿದ್ದು, ಜಾನುವಾರು ಬೋಧನ ಸಂಕೀರ್ಣ ವಿಭಾಗದ (Live stock farm complex) ಮೂಲಕ ಕಾರ್ಯ ನಿರ್ವಹಿಸುತ್ತಿದೆ. ಜಾನುವಾರು ಬೋಧನ ಸಂಕೀರ್ಣ ವಿಭಾಗದ (Live stock farm complex) ಹಿರಿಯ ಪ್ರೊಫೆಸರ್, ಸಹಾಯಕ ಪ್ರಾಧ್ಯಾಪಕರು ಹಾಗೂ ಇನ್ನಿತರೆ ಸಿಬ್ಬಂದಿ ಈ ತಳಿ ಸಂವರ್ಧನ ಕೇಂದ್ರದ ಜವಾಬ್ದಾರಿಯನ್ನು ನಿರ್ವಹಿಸುತ್ತಿದ್ದಾರೆ. ಕೇಂದ್ರದ ಸ್ಥಾಪನೆಗಾಗಿ 2012ರಲ್ಲಿ ರೂ.1.00 ಕೋಟಿ ಅನುದಾನ ಬಿಡುಗಡೆಯಾಗಿದ್ದು, ಅದನ್ನು ಕೇಂದ್ರದ ಮೂಲಭೂತ ಸೌಲಭ್ಯ ಮತ್ತು ಸಂಶೋಧನೆಗಾಗಿ ಉಪಯೋಗಿಸಿಕೊಳ್ಳಲಾಗಿದೆ. ಸದರಿ ಕೇಂದ್ರದಲ್ಲಿ ಸಧ್ಯ 25 ಜಾನುವಾರುಗಳಿದ್ದು, ಮಲೆನಾಡು ಗಿಡ್ಡ ತಳಿಯ ಹಾಲು ಉತ್ಪಾದನೆ, ಜಾನುವಾರುಗಳ ಬೆಳವಣಿಗೆ ಮತ್ತು ಇನ್ನಿತರ ಮಾನದಂಡಗಳಿಗೆ ಸಂಬಂಧಿಸಿದಂತೆ ಸಂಶೋದನೆ ನಡೆಸಲಾಗುತ್ತಿದೆ. ಸದರಿ ಕೇಂದ್ರದ ನಿರ್ವಹಣೆಗಾಗಿ 2019-2020ನೇ ಸಾಲಿನಿಂದ 2024-2025ನೇ ಸಾಲಿನವರೆಗೆ ಒಟ್ಟು ರೂ.17.50 ಲಕ್ಷಗಳ ಅನುದಾನ ಬಿಡುಗಡೆಯಾಗಿರುತ್ತದೆ.

ಮುಂದುವರೆದು, ಮಲೆನಾಡು ಗಿಡ್ಡ ತಳಿ ಅಭಿವೃದ್ಧಿಗಾಗಿ ಪಶುಸಂಗೋಪನೆ ಇಲಾಖೆಯ ವ್ಯಾಪ್ತಿಯಲ್ಲಿಯೂ ಸಹಾ ಜಾನುವಾರು ಸಂವರ್ಧನಾ ಮತ್ತು ತರಬೇತಿ ಕೇಂದ್ರ ಕೊಯ್ಲಾದಲ್ಲಿ ಮಲೆನಾಡು ಗಿಡ್ಡ ತಳಿ ಸಂರಕ್ಷಣೆ ಮತ್ತು ಸಂವರ್ಧನೆ ಮಾಡಲಾಗುತ್ತಿದೆ. ಈ ಕ್ಷೇತ್ರದಲ್ಲಿ 383 ಶುದ್ಧ ಮಲೆನಾಡು ಗಿಡ್ಡ ತಳಿ ಜಾನುವಾರುಗಳ ನೈಸರ್ಗಿಕವಾಗಿ ಸಾಕಾಣಿಕೆ ಮಾಡಲಾಗುತ್ತಿದೆ.

ಈ ಕ್ಷೇತ್ರದಿಂದ ಪ್ರತೀ ವರ್ಷ ಅಮೃತ ಸಿರಿಯೋಜನೆಯಡಿ ರೈತರಿಗೆ ಹೆಣ್ಣು ಕರುಗಳನ್ನು ವಿತರಿಸಲಾಗುತ್ತಿದ್ದು, ಈ ವರ್ಷ 74 ಹೆಣ್ಣು ಕರುಗಳನ್ನು ವಿತರಿಸಲಾಗಿದೆ. ಈ ಕೇಂದ್ರದಲ್ಲಿ ಸಾವಯವ ಗೊಬ್ಬರ "ಸ್ವರ್ಗಸಾರ" ವನ್ನು ಉತ್ಪಾದನೆ ಮಾಡಿ ರೈತರಿಗೆ ಮಾರಾಟ ಮಾಡಲಾಗುತ್ತಿದೆ. ಮಲೆನಾಡು ಗಿಡ್ಡ ತಳಿ ಹಸುಗಳ ಶುದ್ಧ ಮೂತ್ರದಿಂದ ಗೋ ಅರ್ಕ ತಯಾರಿಕಾ ಘಟಕ ಸ್ಥಾಪಿಸಲಾಗಿದೆ ಹಾಗೂ ಸರ್ಕಾರಿ ದರದಲ್ಲಿ ಗೋ ಅರ್ಕವನ್ನು ಮಾರಾಟ ಮಾಡಲಾಗುತ್ತಿದೆ. ಗೋವಿನ ಮೌಲ್ಯವರ್ಧಿತ ಉತ್ಪನ್ನಗಳಾದ ಗೋ ಫಿನಾಯಿಲ್ & ಲಿಕ್ವಿಡ್ ಸೋಪ್ ಇನ್ನಿತರ ಉತ್ಪನ್ನಗಳನ್ನು ಪ್ರಾಯೋಗಿಕ ಹಂತದಲ್ಲಿ ತಯಾರಿಸಲಾಗುತ್ತಿದೆ.

ಕೃತಕ ಗರ್ಭಧಾರಣಾ ಕಾರ್ಯಕ್ರಮದ ಅಂಗವಾಗಿ ವೀರ್ಯ ಉತ್ಪಾದನೆಗೆ ಅಗತ್ಯವಿರುವ ಉತ್ತಮ ಹೋರಿಗಳನ್ನು ಉತ್ಪಾದಿಸಿ ಘನೀಕೃತ ವೀರ್ಯ ಉತ್ಪಾದನಾ ಕೇಂದ್ರಗಳಿಗೆ ಒದಗಿಸಲಾಗುತ್ತಿದೆ. ಇಲಾಖೆಯ ಪಶುವೈದ್ಯಕೀಯ ಸೇವಾ ಸಂಸ್ಥೆಗಳ ಮೂಲಕ ಕೃತಕ ಗರ್ಭಧಾರಣಾ ಕಾರ್ಯಕ್ರಮವನ್ನು ಜಾರಿಗೊಳಿಸಲಾಗಿದ್ದು, 2023-2024ನೇ ಸಾಲಿನಲ್ಲಿ 11535 ಹಾಗೂ ಪ್ರಸಕ್ತ ಸಾಲಿನಲ್ಲಿ 8129 ಕೃತಕ ಗರ್ಭದಾರಣೆ ಮಾಡಲಾಗಿದೆ.

ಈ ಮೂಲಕ ಮಲ್ನಾಡ್ ಗಿಡ್ಡ ತಳಿಯ ಸಂರಕ್ಷಣೆ, ಸಂವರ್ಧನೆ ಹಾಗೂ ಹಾಲು ಉತ್ಪಾದನೆ ಹೆಚ್ಚಿಸಲು ಕ್ರಮವಹಿಸಲಾಗಿದೆ. ಪ್ರಸ್ತುತ ರಾಜ್ಯದಲ್ಲಿ 20 ನೇ ಜಾನುವಾರು ಗಣತಿ -2019 ಪ್ರಕಾರ 631523 ಮಲೆನಾಡು ಗಿಡ್ಡ ಜಾನುವಾರುಗಳು ಇರುತ್ತವೆ.

ಸಂಖ್ಯೆ:ಇ ಪಸಂಮೀ 337 ಸಲೆವಿ 2024

(ಕೆ.ವೆಂಕಟೇಶ್)

ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು.